A-PDF Merger DEMO : Purchase from www.A-PDF.com to remove the watermark

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಂಗಳೂರಿನ ಮಹಾತ್ಮ ಗಾಂಧಿ ರಸ್ತೆಯಲ್ಲಿರುವ ನಿವೇಶನ ಸಂಖ್ಯೆ 19 ರಲ್ಲಿ ಸಮಾಜ ಕಲ್ಯಾಣ ಇಲಾಖಾ ಕಛೇರಿಗಳ ಸಂಕೀರ್ಣ ನಿರ್ಮಿಸುವ ಬಗ್ಗೆ.

ಓದಲಾಗಿದೆ:- (1) ಸರ್ಕಾರಿ ಆದೇಶ ಸಂಖ್ಯೆ:ನಅಇ 153 ಬಿಎಂಆರ್ 2005. ದಿನಾಂಕ:17-04-2006.

(2) ಸರ್ಕಾರಿ ಪತ್ರ ಸಂಖ್ಯೆ:ಸಕಇ 205 ಪಕವಿ 2007. ದಿನಾಂಕ:12-12-2007.

*****

**ಪ್ರಸ್ತಾವನೆ:-**

ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ ಬೆಂಗಳೂರಿನ ಮಹಾತ್ಮ ಗಾಂಧಿ ರಸ್ತೆಯಲ್ಲಿ ನಿವೇಶನ ಸಂಖ್ಯೆ 19 ರಲ್ಲಿ ಸುಮಾರು 0.922 ಎಕರೆ ವಿಸ್ತೀರ್ಣದ ಭೂಮಿಯನ್ನು ರೂ.21.68 ಕೋಟಿಗಳ ಮೌಲ್ಯಕ್ಕೆ ಬೆಂಗಳೂರು ಮೆಟ್ರೋ ರೈಲ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ ವರ್ಗಾಯಿಸಲು ಮಂಜೂರಾತಿ ನೀಡಲಾಗಿತ್ತು. ನಂತರ (2) ರಲ್ಲಿ ಓದಲಾದ ಸರ್ಕಾರಿ ಪತ್ರದಲ್ಲಿ ಸರ್ಕಾರಿ ವಿಜ್ಞಾನ ಕಾಲೇಜು ವಿದ್ಯಾರ್ಥಿನಿಲಯದ ಮೇಲ್ಭಾಗದಲ್ಲಿ ಒಳಾಂಗಣ ಕ್ರೀಡೆ ಮತ್ತು ಜಿಮ್ನ್ಯಾಷಿಯಂ ಇವುಗಳಿಗೆ ಅನುಕೂಲವಾಗುವಂತೆ ಕ್ರೀಡಾಂಗಣವನ್ನು ಬೆಂಗಳೂರು ಮೆಟ್ರೋ ರೈಲ್ ಯೋಜನೆ ಇವರು ಸ್ವಂತ ಖರ್ಚಿನಲ್ಲಿ ನಿರ್ಮಾಣ ಮಾಡಿಕೊಡುವ ಷರತ್ತಿಗೊಳಪಟ್ಟು ಉಲ್ಲೇಖಿತ ಭೂಮಿಯನ್ನು ಬೆಂಗಳೂರು ಮೆಟ್ರೋ ರೈಲ್ ಯೋಜನೆಗೆ ಹಸ್ತಾಂತರಿಸಲು ಅನುಮತಿ ನೀಡಲಾಗಿತ್ತು.

ಆದರೆ ಬಿ.ಎಂ.ಆರ್.ಸಿ.ಎಲ್. ಇವರು ಇದುವರೆಗೆ ಯಾವುದೇ ಮೊತ್ತ ಪಾವತಿಸಿರುವುದಿಲ್ಲ. ಅದಲ್ಲದೆ ಭೂಮಿಯು ಹಸ್ತಾಂತರಗೊಂಡಿರುವುದಿಲ್ಲ.

ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಗೆ ಬರುವ ಆಯುಕ್ತರು, ಸಮಾಜ ಕಲ್ಯಾಣ, ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆಯೋಗ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಡಾ:ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ ಹಾಗೂ ಇತರೆ ಕಚೇರಿಗಳಿಗೆ ಸೂಕ್ತ ಕಟ್ಟಡ ಲಭ್ಯವಿರುವುದಿಲ್ಲ. ಅದಲ್ಲದೆ ಕೆಲವು ಕಛೇರಿಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಹೆಚ್ಚಿನ ಮೊತ್ತದ ಬಾಡಿಗೆ ಪಾವತಿಸಲಾಗುತ್ತಿದೆ. ಸದರಿ ಕಛೇರಿಗಳ ಉಪಯೋಗಕ್ಕಾಗಿ ಉಲ್ಲೇಖಿತ ನಿವೇಶನದಲ್ಲಿ ಕಛೇರಿಗಳ ಸಂಕೀರ್ಣ (ಸ್ಫೂರ್ತಿ ಸೌಧ) ನಿರ್ಮಿಸುವ ಅವಶ್ಯಕತೆ ಇರುತ್ತದೆ.

ಆ ಹಿನ್ನೆಲೆಯಲ್ಲಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 163 ಪಕವಿ 2011, ಬೆಂಗಳೂರು ದಿನಾಂಕ:07-09-2011**

ಬೆಂಗಳೂರಿನ ಮಹಾತ್ಮ ಗಾಂಧಿ ರಸ್ತೆಯಲ್ಲಿರುವ ನಿವೇಶನ ಸಂಖ್ಯೆ 19 ರಲ್ಲಿ 0.922 ಎಕರೆ ವಿಸ್ತೀರ್ಣದ ಭೂಮಿಯನ್ನು ಬೆಂಗಳೂರು ಮೆಟ್ರೋ ರೈಲ್ ಕಾರ್ಪೋರೇಷನ್ ಲಿಮಿಟೆಡ್ ಇವರಿಗೆ ಹಸ್ತಾಂತರಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದ ಸರ್ಕಾರಿ ಪತ್ರ ಸಂಖ್ಯೆ:ಸಕಇ 205 ಪಕವಿ 2007. ದಿನಾಂಕ:12-12-2007 ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂದಕ್ಕೆ ಪಡೆಯಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

7/9/2011

(ಎ.ಎಂ.ಚಿದಾನಂದಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ

ಗೆ:-

1) ಮಹಾಲೇಖಪಾಲರು (ಎ & ಇ. ಲೆಕ್ಕಪರಿಶೋಧನೆ-1. 2) ಕರ್ನಾಟಕ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ

3) ಆಯುಕ್ತರು. ಸಮಾಜ ಕಲ್ಯಾಣ ಇಲಾಖೆ. ಬೆಂಗಳೂರು
4) ಆಯುಕ್ತರು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ಬೆಂಗಳೂರು
5) ವ್ಯವಸ್ಥಾಪಕ ನಿರ್ದೇಶಕರು. ಬೆಂಗಳೂರು ಮೆಟ್ರೋ ರೈಲ್ ನಿಗಮ ನಿಯಮಿತ. ಬೆಂಗಳೂರು
6) ಶಾಖಾ ರಕ್ಷಾ ಕಡತ
7) ಹೆಚ್ಚುವರಿ ಪ್ರತಿ-೦3

<u>ಪ್ರತಿ ಇವರಿಗೆ</u>:-

- ಮಾನ್ಯ ಸಮಾಜ ಕಲ್ಯಾಣ ಹಾಗೂ ಬಂದೀಖಾನೆ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ